**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ/01/ಇಎಸ್‌ಟಿ(9)/2018/2597

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 21/12/2018.

## ಹಿಂಬರಹ

ಕರ್ನಾಟಕ ಸರ್ಕಾರದ ಪತ್ರ ಸಂಖ್ಯೆ: ಸಿಆಸುಇ 18 ಸೇನೌವ 2018 ಬೆಂಗಳೂರು, ದಿನಾಂಕ:11/12/2018ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್‌ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ ಕೆ.ಜಿ.ಎಫ್.ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ ಜಂಟಿ ನಿರ್ದೇಶಕರು, [ಆಡಳಿತ], ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3) ಹಾಗೂ ರಿಜಿಸ್ಟ್ರಾರ್ [ಆಡಳಿತ], ಸಾರ್ವಜನಿಕ ಸಂಪರ್ಕಾಧಿಕಾರಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಎಂಐಎಸ್‌ಸಿ ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇ.ಎಸ್.ಟಿ.(1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 18 ಸೇನೌವ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ
ಬೆಂಗಳೂರು, ದಿನಾಂಕ: 11.12.2018

**ಸೇರ್ಪಡೆ(Addendum)**

ವಿಷಯ: ಸರ್ಕಾರಿ ನೌಕರರ ವರ್ಗಾವಣೆಗೆ ಸಂಬಂಧಿಸಿದಂತೆ ಹೆಚ್ಚುವರಿ ಮಾರ್ಗಸೂಚಿಗಳು.

****

ಸರ್ಕಾರಿ ನೌಕರರ ವರ್ಗಾವಣೆಗೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಹೊರಡಿಸಲಾದ ದಿನಾಂಕ:07.06.2013ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013ರ ಕಂಡಿಕೆ 6(ಅ) ನಂತರ ಈ ಕೆಳಕಂಡ ಅಂಶಗಳನ್ನು ಸೇರ್ಪಡಿಸಲಾಗಿದೆ:

"(ಇ) ವರ್ಗಾವಣೆಗೊಂಡ ಸರ್ಕಾರಿ ನೌಕರರು ವರ್ಗಾವಣೆ ಆದೇಶದ ಪ್ರಕಾರ ಅವರಿಗೆ ವರ್ಗಾಯಿಸಲಾದ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರಾಗದೆ, ವೈದ್ಯಕೀಯ ಕಾರಣಗಳನ್ನು ನೀಡಿ ರಜೆ ಅರ್ಜಿಗಳನ್ನು ಸಲ್ಲಿಸುವ ಪ್ರಕರಣಗಳಲ್ಲಿ, ವರ್ಗಾವಣೆಗೊಂಡ ಅಂತಹ ಸರ್ಕಾರಿ ನೌಕರರು, ವರ್ಗಾವಣೆ ಆದೇಶವನ್ನು ಹೊರಡಿಸಿದ ಪೂರ್ವದಲ್ಲಿ ಅಥವಾ ಸೇರುವಿಕೆ ಕಾಲದಲ್ಲಿ ಆಸ್ಪತ್ರೆಯಲ್ಲಿ ಒಳರೋಗಿಯಾಗಿ(**as in-patient**) ಚಿಕಿತ್ಸೆಯನ್ನು ಪಡೆಯುವ ಸಂದರ್ಭದಲ್ಲಿ ಮಾತ್ರ, ಅಗತ್ಯ ದಾಖಲೆಗಳೊಂದಿಗೆ ಹಾಗೂ ವೈದ್ಯಕೀಯ ಮಂಡಳಿಯ ದೃಢೀಕರಣ ಪತ್ರದೊಂದಿಗೆ ರಜೆಯನ್ನು ಕೋರಿ ಅರ್ಜಿಯನ್ನು ಸಲ್ಲಿಸಿದಲ್ಲಿ, ವೈದ್ಯಕೀಯ ಕಾರಣಗಳ ಮೇಲೆ ರಜೆಯನ್ನು ಮಂಜೂರು ಮಾಡುವ ಬಗ್ಗೆ ಸಕ್ಷಮ ಪ್ರಾಧಿಕಾರ ಪರಿಶೀಲಿಸಿ ರಜೆಯನ್ನು ಮಂಜೂರು ಮಾಡುವ ಬಗ್ಗೆ ನಿರ್ಣಯಿಸಬಹುದಾಗಿದೆ.

(ಈ) ಒಳರೋಗಿಯಾಗಿದ್ದವರು ಆಸ್ಪತ್ರೆಯಿಂದ ಬಿಡುಗಡೆಯಾಗಿ, ತದನಂತರ ಹೊರರೋಗಿಯಾಗಿ ಚಿಕಿತ್ಸೆ ಪಡೆಯುತ್ತಿದ್ದರೆ ಅಥವಾ ವೈದ್ಯಕೀಯ ಸಲಹೆ ಮೇರೆಗೆ ಚಿಕಿತ್ಸೆ/ ವಿಶ್ರಾಂತಿ ಪಡೆಯುತ್ತಿದ್ದರೆ, ಅವರು ವರ್ಗಾವಣೆಗೊಂಡ ಸ್ಥಳದಲ್ಲಿ ಸೇರಿಕೆ ಕಾಲದೊಳಗೆ ಕರ್ತವ್ಯಕ್ಕೆ ಹಾಜರಾಗಿ, ರಜಾ ಅರ್ಜಿಯನ್ನು ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸಿ, ರಜೆ ಮಂಜೂರು ಮಾಡಿದ ನಂತರವೇ ರಜೆ ಮೇಲೆ ತೆರಳಬಹುದು. ಇಲ್ಲದಿದ್ದಲ್ಲಿ ಸೇರಿಕೆ ಕಾಲ ಮೀರಿದ ಅವಧಿಯನ್ನು ಅನಧಿಕೃತ ಗೈರು ಹಾಜರಿ ಎಂದು ಪರಿಗಣಿಸತಕ್ಕದ್ದು.

(ಉ) ಸಂಬಂಧಿಸಿದ ಸರ್ಕಾರಿ ನೌಕರರು ಒಳರೋಗಿಯಾಗಿ ಚಿಕಿತ್ಸೆ ಪಡೆಯುವ ಸಂದರ್ಭದಲ್ಲಿ ವೈದ್ಯಕೀಯ ಕಾರಣಗಳ ಮೇಲೆ ರಜಾ ಅರ್ಜಿಯನ್ನು ಕಡ್ಡಾಯವಾಗಿ

97



ನಿಗದಿತ ಸೇರಿಕೆ ಕಾಲದೊಳಗೆ(within the joining time prescribed) ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು. ಇಲ್ಲದಿದ್ದಲ್ಲಿ ಸೇರಿಕೆ ಕಾಲ ಮೀರಿದ ಅವಧಿಯನ್ನು ಅನಧಿಕೃತ ಗೈರುಹಾಜರಿ ಎಂದು ಪರಿಗಣಿಸತಕ್ಕದ್ದು."

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

Gayathri. M.R
1/12/18

(ಗಾಯತ್ರಿ ಎಂ.ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

**ಇವರಿಗೆ,**
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ - ಇದನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸೇವಾ ನಿಯಮಗಳು-1, ಕೊಠಡಿ ಸಂಖ್ಯೆ: 31, ವಿಧಾನ ಸೌಧ, ಬೆಂಗಳೂರು ಇವರಿಗೆ ಕಳುಹಿಸಿಕೊಡಲು ಕೋರಿದೆ.

<u>ಪ್ರತಿ:</u>

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
12. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
14. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
15. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
17. ಎಲ್ಲಾ ಸಚಿವರ /ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು
18. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಲ್ಯ ಮಾರ್ಗ್, ಚಾಣಕ್ಯಪುರಿ, ನವದೆಹಲಿ-110 011.
19. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
20. ಸಚಿವಾಲಯದ ಎಲ್ಲಾ ಶಾಖೆಗಳು.
21. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
22. ವಾರದ ರಾಜ್ಯಪತ್ರ.
23. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(*ಮುಖಪತ್ರದೊಂದಿಗೆ)